ಸಂಖ್ಯೆ-ಬಿ.ಸಿ.ಸಿ/70/2016 ದಿನಾಂಕ-03-11-2016

# ಬೆಂಗಳೂರು ವಿಶ್ವವಿದ್ಯಾಲಯ

## ಅಂಚೆ ತೆರಪು ಹಾಗೂ ದೂರ ಶಿಕ್ಷಣ ನಿರ್ದೇಶನಾಲಯ

ಜ್ಞಾನಭಾರತಿ ಆವರಣ, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು – 560 056

## ಸಾರ್ವಜನಿಕ ಪ್ರಕಟಣೆ

ವಿಶ್ವವಿದ್ಯಾಲಯಗಳ ಧನಸಹಾಯ ಆಯೋಗ, ನವದೆಹಲಿ ಇವರು ತಮ್ಮ ಪತ್ರ ಸಂಖ್ಯೆ : **F.No.7-8/2016 (DEB-I)/459 ದಿನಾಂಕ:22/09/2016** ರಲ್ಲಿ ಬೆಂಗಳೂರು ವಿಶ್ವವಿದ್ಯಾಲಯದ, ಅಂಚೆ ತೆರಪು ಹಾಗೂ ದೂರ ಶಿಕ್ಷಣ ನಿರ್ದೇಶನಾಲಯದ ಮೂಲಕ ನಡೆಸುತ್ತಿರುವ ತಮ್ಮ ಭೌಗೋಳಿಕ ವ್ಯಾಪ್ತಿಗೆ ಹೊರಗಿರುವ ಎಲ್ಲಾ ಅಧ್ಯಯನ ಕೇಂದ್ರಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಗೊಳಿಸಲು ಆದೇಶಿಸಿದೆ. ಅಂತೆಯೇ ಕರ್ನಾಟಕ ಸರ್ಕಾರ ಸಹ ಬೆಂಗಳೂರು ವಿಶ್ವವಿದ್ಯಾಲಯದ ಭೌಗೋಳಿಕ ವ್ಯಾಪ್ತಿಯ ಹೊರಗಿರುವ ಎಲ್ಲಾ ಅಧ್ಯಯನ ಕೇಂದ್ರಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಗೊಳಿಸಲು ಆದೇಶಿಸಿದೆ. ಈ ಕಾರಣ ಕರ್ನಾಟಕದಾದ್ಯಂತ ಬೆಂಗಳೂರು ವಿಶ್ವವಿದ್ಯಾಲಯದ ಭೌಗೋಳಿಕ ವ್ಯಾಪ್ತಿಯ ಹೊರಗೆ ಎಂದರೆ, ಬೆಂಗಳೂರು ನಗರ ಮತ್ತು ಬೆಂಗಳೂರು ಗ್ರಾಮೀಣ ಹಾಗೂ ಕೋಲಾರ, ರಾಮನಗರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳನ್ನು ಹೊರತು ಪಡಿಸಿ ಉಳಿದ ಎಲ್ಲಾ ಅಂಚೆ ತೆರಪು ಹಾಗೂ ದೂರ ಶಿಕ್ಷಣ ಅಧ್ಯಯನ ಕೇಂದ್ರಗಳ ಮಾನ್ಯತೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಗೊಳಿಸಲಾಗಿದೆ. ಮಾತ್ರವಲ್ಲದೆ, ಅವರುಗಳೊಡನೆ ಮಾಡಿಕೊಂಡ ಒಪ್ಪಂದ ಪತ್ರಗಳನ್ನೂ ಸಹ ರದ್ದುಗೊಳಿಸಲಾಗಿದೆ. ಈ ಕಾರಣ, ಬೆಂಗಳೂರು ವಿಶ್ವವಿದ್ಯಾಲಯದ ಭೌಗೋಳಿಕ ವ್ಯಾಪ್ತಿಯ ಹೊರಗೆ ಯಾವ ದೂರ ಶಿಕ್ಷಣ ಅಧ್ಯಯನ ಕೇಂದ್ರಗಳು ಇನ್ನು ಮುಂದೆ ಅಸ್ತಿತ್ವದಲ್ಲಿರುವುದಿಲ್ಲ.

ಈ ಕಾರಣ, ಇನ್ನು ಮುಂದೆ ಬೆಂಗಳೂರು ವಿಶ್ವವಿದ್ಯಾಲಯದಲ್ಲಿ ನೇರವಾಗಿ ಮಾತ್ರ ಅಂಚೆ ತೆರಪು ಹಾಗೂ ದೂರ ಶಿಕ್ಷಣ ಆಸಕ್ತ ವಿದ್ಯಾರ್ಥಿಗಳು ಎಂದರೆ ಪ್ರಥಮ ವರ್ಷದ ಸ್ನಾತಕ / ಸ್ನಾತಕೋತ್ತರ ಪದವಿ ಹಾಗೂ ಡಿಪ್ಲೋಮೋ ಮತ್ತು ಸರ್ಟಿಫಿಕೇಟ್ ಕೋರ್ಸ್‌ಗಳಿಗೆ ನಿರ್ದೇಶನಾಲಯದ ಪ್ರಕಟಣೆಯ ನಂತರ ನೋಂದಣಿ ಪಡೆಯಬಹುದಾಗಿದೆ. ಹಾಗೂ ಇನ್ನು ಮುಂದೆ ಬೆಂಗಳೂರು ವಿಶ್ವವಿದ್ಯಾಲಯದ ಭೌಗೋಳಿಕ ವ್ಯಾಪ್ತಿಯಿಂದ ಹೊರಗಿರುವ ಯಾವುದೇ ಸಂಸ್ಥೆ, ವ್ಯಕ್ತಿಯಿಂದ ನೋಂದಣಿ ಪಡೆದಿದ್ದಲ್ಲಿ ಅಂತಹ ನೋಂದಣಿಗಳಿಗೆ ಬೆಂಗಳೂರು ವಿಶ್ವವಿದ್ಯಾಲಯದ ಯಾವುದೇ ಹೊಣೆಗಾರಿಗೆ ಇರುವುದಿಲ್ಲ.

ಸಾರ್ವಜನಿಕರು, ಆಸಕ್ತ ವಿದ್ಯಾರ್ಥಿಗಳು ಮತ್ತು ಪೋಷಕರು ಗಮನಿಸುವುದು.

ಕುಲಸಚಿವರು

REGISTRAR
BANGALORE UNIVERSITY